062153

## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 353

ಮಾನ್ಯ ಸದಸ್ಯರ ಹೆಸರು : ಡಾ|| ಡಿ. ತಿಮ್ಮಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 16.02.2023.

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ರಾಷ್ಟ್ರೀಯ ಪಿಂಚಣಿ ಯೋಜನೆಗೆ (ಎನ್.ಪಿ.ಎಸ್) ಒಳಪಟ್ಟ ಸರ್ಕಾರಿ ನೌಕರರ ಸಂಖ್ಯೆ ಎಷ್ಟು: | ದಿನಾಂಕ:04.02.2023ರ ಅಂತ್ಯಕ್ಕೆ ರಾಷ್ಟ್ರೀಯ ಪಿಂಚಣಿ ಯೋಜನೆಗೆ ಒಳಪಡುವ ಸರ್ಕಾರಿ ನೌಕರರ ಸಂಖ್ಯೆ: 2,62,482. |
| ಆ) | ಈ ನೌಕರರು ಹಳೆಯ ಪಿಂಚಣಿ ಯೋಜನೆಯನ್ನು ಮರುಜಾರಿಗೊಳಿಸುವಂತೆ ಒತ್ತಾಯಿಸಿ ರಾಜ್ಯದಾದ್ಯಂತ ಹೋರಾಟ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಇ) | ಈಗಾಗಲೇ ದೇಶದಲ್ಲಿ ಕೆಲವು ರಾಜ್ಯಗಳೂ ಹಳೆಯ ಪಿಂಚಣಿ ಯೋಜನೆಯನ್ನು ಜಾರಿಗೆ ತಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲ್ಲ. |
| ಈ) | ಬಂದಿದ್ದಲ್ಲಿ ನಮ್ಮ ರಾಜ್ಯದಲ್ಲಿಯೂ ಹಳೆಯ ಪಿಂಚಣಿ ಯೋಜನೆಯನ್ನು ಜಾರಿಗೆ ತರುವ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು? | ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರವರು ರಚಿಸಿದ ಸಮಿತಿಯ ವರದಿಯ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ: 01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ: 31.03.2006 ರನ್ವಯ ದಿನಾಂಕ: 01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ.<br>ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ. |

ಆಇ-ಪಿಇಎನ್/66 /2023

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ



Generated from eOffice by G JAGADEESHA, CMO-JS(GJ), JOINT SECREATRY, CMO on 13/02/2023 10:36 AM